# ಕರ್ನಾಟಕ ಸರ್ಕಾರ

ಆಯುಕ್ತರವರ ಕಾರ್ಯಾಲಯ, ಪಶುಪಾಲನೆ ಮತ್ತು ಪಶುವೈದ್ಯ ಸೇವಾ ಇಲಾಖೆ, 2ನೇ ಮಹಡಿ,
ಸರ್.ಎಂ.ವಿಶ್ವೇಶ್ವರಯ್ಯ ಚಿಕ್ಕ ಗೋಪುರ, ಡಾ:ಬಿ.ಆರ್.ಅಂಬೇಡ್ಕರ್ ವೀದಿ, ಬೆಂಗಳೂರು-560 001.

ಪ್ರಕಟಣೆ ಸಂಖ್ಯೆ:ಆಪಸಂ:ಸಿಬ್ಬಂದಿ-2:ವಿವ-270:2016-17 ಬೆಂಗಳೂರು ದಿನಾಂಕ:06-03-2017.

ಭರ್ತಿ ಮಾಡಿದ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಲಾದ ಕೊನೆಯ ದಿನಾಂಕ: 05-04-2017.

ಅಧಿಸೂಚನೆ

ವಿಷಯ 450 ಹುದ್ದೆ ಹಾಗೂ 100 ಬ್ಯಾಕ್ ಲಾಗ್ ಪಶುವೈಧ್ಯಾಧಿಕಾರಿಗಳ ಹುದ್ದೆಯನ್ನು ತುಂಬಲು ಅರ್ಜಿಗಳನ್ನು ಆಹ್ವಾನಿಸಿರುವುದು.

~~~~~

ಸರ್ಕಾರದ ಅಧಿಸೂಚನೆ ಸಂಖ್ಯೆ:ಪಸಂಮೀ:06:ಪಸಸೇ:2014(ಭಾಗ-IV) ಬೆಂಗಳೂರು ದಿನಾಂಕ:18-02-2017 ವಿಶೇಷ ನೇಮಕಾತಿ ನಿಯಮಾವಳಿಯನ್ವಯ 450 ಹಾಗೂ 100 ಬ್ಯಾಕ್‌ಲಾಗ್ ಖಾಲಿ ಪಶುವೈದ್ಯಾಧಿಕಾರಿಗಳ ಎ ಗುಂಪಿನ ಹುದ್ದೆಗಳನ್ನು (ವೇತನ ಶ್ರೇಣಿ. 28100-50100) ಕರ್ನಾಟಕ ಪಶುಸಂಗೋಪನೆ ಮತ್ತು ಪಶುವೈದ್ಯಕೀಯ ಸೇವೆ (ಪಶುವೈದ್ಯಾಧಿಕಾರಿಗಳ ನೇಮಕಾತಿ) (ವಿಶೇಷ) ನಿಯಮಗಳು 2016 ರನ್ವಯ ಆಯ್ಕೆಗಾಗಿ ಪರಿಗಣಿಸಲು ಅರ್ಹ ಅಭ್ಯರ್ಥಿಗಳಿಂದ ನಿಗಧಿತ ನಮೂನೆಯಲ್ಲಿ ದ್ವಿಪ್ರತಿಗಳಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿಯನ್ನು ಈ ಪ್ರಕಟಣೆಯಲ್ಲಿ ಕಾಣಿಸಿರುವ ನಮೂನೆಯಲ್ಲಿ ಬೆರಳಚ್ಚು ಮಾಡಿದ/ಗಣಕೀಕೃತ ಅರ್ಜಿಗಳನ್ನು ಸ್ವೀಕರಿಸಲಾಗುವುದು. ಕೈಬರಹದ/ಜೆರಾಕ್ಸ್/ಮುದ್ರಿತ ಅಥವಾ ಇತರೆ ಯಾವುದೇ ಆಯ್ಕೆ ಪ್ರಾಧಿಕಾರದ / ಆಯೋಗದ ಅರ್ಜಿಗಳನ್ನು ಒಪ್ಪಲಾಗುವುದಿಲ್ಲ. ಹೈದರಾಬಾದ್ ಕರ್ನಾಟಕ ಭಾಗದ ಅಭ್ಯರ್ಥಿಗಳಿಗೆ ಮೀಸಲಾತಿ ಕಲ್ಪಿಸಿದೆ.

1. ಆಯ್ಕೆಯನ್ನು ಬಿ.ವಿ.ಎಸ್‌ಸಿ./ಬಿ.ವಿ.ಎಸ್‌ಸಿ ಅಂಡ್ ಎಹೆಚ್ ಪದವಿಯಲ್ಲಿ ಎಲ್ಲಾ ವರ್ಷಗಳಲ್ಲಿ ಗಳಿಸಿದ ಒಟ್ಟು ಶೇಕಡಾವಾರು ಅಂಕಗಳ ಅರ್ಹತೆ ಆಧಾರದ ಮೇಲೆ ಹಾಗೂ ಮೀಸಲಾತಿಗನುಗುಣವಾಗಿ ನಡೆಸಲಾಗುವುದು.

2. **ನಿಗಧಿಪಡಿಸಿದ ವಿದ್ಯಾರ್ಹತೆ:** ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದಂದು ಅಂದರೆ ದಿನಾಂಕ: **05-04-2017**ರ ಒಳಗಾಗಿ ಅಭ್ಯರ್ಥಿಯು ಭಾರತದಲ್ಲಿ ಕಾನೂನು ರೀತ್ಯ ಸ್ಥಾಪಿಸಲಾದ ಯಾವುದೇ ಪಶುವೈದ್ಯಕೀಯ ವಿಜ್ಞಾನ ವಿಶ್ವವಿದ್ಯಾಲಯ ಅಥವಾ ಕೃಷಿ ವಿಶ್ವವಿದ್ಯಾಲಯದಿಂದ ಬಿ.ವಿ.ಎಸ್‌ಸಿ./ಬಿ.ವಿ.ಎಸ್‌ಸಿ. ಅಂಡ್ ಎಹೆಚ್ ಪದವಿಯನ್ನು ಪಡೆದಿರಬೇಕು ಹಾಗೂ ಅದೇ ದಿನಾಂಕ ಅಂದರೆ ದಿ:**05-04-2017** ರ ಒಳಗಾಗಿ ಕರ್ನಾಟಕ ಪಶುವೈದ್ಯಕೀಯ ಪರಿಷತ್ತಿನ ಕಾಯ್ದೆ 1984ರ ಅಡಿಯಲ್ಲಿ K.V.C ನೋಂದಣಿಯಾಗಿರಬೇಕು.

3. **ವಯೋಮಿತಿ:** ಅಭ್ಯರ್ಥಿಗಳಿಂದ ಪೂರ್ಣಗೊಳಿಸಿದ ಅರ್ಜಿಗಳನ್ನು ಸ್ವೀಕರಿಸಲು ನಿಗಧಿಪಡಿಸಿದ ಅಂತಿಮ ದಿನಾಂಕದಂದು ಕನಿಷ್ಠ ವಯೋಮಿತಿ 18 ವರ್ಷ ಪೂರ್ಣಗೊಂಡಿರಬೇಕು ಹಾಗೂ ನಿಗದಿತ ವರ್ಗವಾರು ಗರಿಷ್ಠ ವಯೋಮಿತಿಯನ್ನು ಮೀರಿರಬಾರದು. ವಯೋಮಿತಿಯನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ. ಡಿಪಿಎಆರ್/42/ಎಸ್‌ಆರ್‌ಆರ್/2008 ದಿನಾಂಕ: 18.12.2008 ರ ಮೇರೆಗೆ ನಿಗಧಿಪಡಿಸಲಾಗಿದೆ.

| | |
|---|---|
| ಸಾಮಾನ್ಯ ವರ್ಗ | 35 ವರ್ಷಗಳು |
| ಪ್ರವರ್ಗ IIಎ, IIಬಿ<br>ಪ್ರವರ್ಗ IIIಎ, IIIಬಿ | 38 ವರ್ಷಗಳು |
| ಪಜಾ, ಪಪಂ. ಪ್ರವರ್ಗ-I | 40 ವರ್ಷಗಳು |
~~~~~

